ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**ARNATAKA LEGISLATIVE ASSEMBLY, RESEARCH AND REFERENCE BRANCH**

## ಪತ್ರಿಕಾ ತುಣುಕುಗಳು
## PAPER CLIPPINGS

16

ಾಖೆ / ವಿಷಯ : DEPARTMENT / SUBJECT: ಬಿಬಿಎಂಪಿ

ಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 25/8/2020

# ಜಂಟಿ ಸಲಹಾ ಸಮಿತಿಗೆ ರಘು ಅಧ್ಯಕ್ಷ

ಪ್ರ.ವಾ. 25-8-20

ಬೆಂಗಳೂರು: 'ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮಸೂದೆ 2020ರ' ಪರಾಮರ್ಶೆಗಾಗಿ ರಚಿಸಿರುವ ಜಂಟಿ ಸಲಹಾ ಸಮಿತಿ ಅಧ್ಯಕ್ಷರನ್ನಾಗಿ ಬಿಜೆಪಿ ಶಾಸಕ ಎಸ್.ರಘು ಅವರನ್ನು ಆಯ್ಕೆ ಮಾಡಲಾಗಿದೆ.

ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಉಪಸ್ಥಿತಿಯಲ್ಲಿ ಸೋಮವಾರ ನಡೆದ ಸಮಿತಿಯ ಮೊದಲ ಸಭೆಯಲ್ಲಿ ಈ ಆಯ್ಕೆ ನಡೆಯಿತು. ಸಮಿತಿಯು ಮುಂದಿನ ಮೂರು ತಿಂಗಳಲ್ಲಿ ವರದಿಯನ್ನು ಸಲ್ಲಿಸಲಿದೆ. ಈ ವರ್ಷದ ಮಾರ್ಚ್‌ನಲ್ಲಿ ನಡೆದ ವಿಧಾನಸಭೆ ಅಧಿವೇಶನದಲ್ಲಿ ಈ ಮಸೂದೆಗೆ ಪಕ್ಷಾತೀತ ವಿರೋಧ ವ್ಯಕ್ತವಾಗಿತ್ತು. ಮಸೂದೆಯನ್ನು ಸಮಿತಿಗೆ ಒಪ್ಪಿಸಬೇಕು ಎಂದೂ ಆಗ್ರಹಿಸಲಾಗಿತ್ತು.

ಎಸ್.ರಘು 'ಪ್ರಜಾವಾಣಿ' ಜತೆ ಮಾತನಾಡಿ, 'ಈಗಿನ ಮತ್ತು ಭವಿಷ್ಯದ ಬೆಂಗಳೂರನ್ನು ಗಮನದಲ್ಲಿ ಇಟ್ಟುಕೊಂಡು ವಾರ್ಡ್‌ಗಳ ರಚನೆ, ಮೇಯರ್ ಅಧಿಕಾರ ಅವಧಿ, ಕೆಎಂಸಿ ಕಾಯ್ದೆ 1976 ರಲ್ಲಿ ಮಾಡಬೇಕಾದ ಬದಲಾವಣೆಗಳ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಗುವುದು. ಶಾಸಕರಲ್ಲದೆ, ಬಿಬಿಎಂಪಿ ಅಧಿಕಾರಿಗಳು, ಕಾನೂನು ತಜ್ಞರು, ಇಲಾಖೆಗಳ ಕಾರ್ಯದರ್ಶಿಗಳು ಮುಂಬರುವ ಸಭೆಗಳಲ್ಲಿ ಭಾಗವಹಿಸಲಿದ್ದಾರೆ' ಎಂದರು.

'ಕಾನೂನು ಸಚಿವ ಜೆ.ಸಿ. ಮಾಧುಸ್ವಾಮಿ, ಶಿಕ್ಷಣ ಸಚಿವ ಎಸ್. ಸುರೇಶ್ ಕುಮಾರ್ ಸಭೆಯಲ್ಲಿ ಭಾಗವಹಿಸಿದ್ದರು. ಮುಂದಿನ ಸಭೆ ಸೆ.1 ರಂದು ನಡೆಯಲಿದೆ' ಎಂದರು.